# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/38/2020–21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ–ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ;22
ಬೆಂಗಳೂರು – 560032.
ದಿನಾಂಕ:29–11–2021

## ದಿನಾಂಕ; 29–11–2021 ರಂದು ವಾರ್ಡ್ ಸಮಿತಿ ಸಭೆಯ ನಡವಳಿಗಳು;–

- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕರು, ಸದಸ್ಯರು
- ಶ್ರೀ. ಡೇವಿಡ್ ಫರ್ನಾಂಡಿಸ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು
- ಶ್ರೀ. ಮುನಿಯಲ್ಲಪ್ಪ ವಾರ್ಡ್ ಗುತ್ತಿಗೆದಾರರು
- ಶ್ರೀ. ಹೇಮಾಲತ, ನಾಗರೀಕರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ; 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ; 18–09–2021 ರಂದು ನಡೆದ.

ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಬಿದ್ದಿರುವ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರಿನಿಂದ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಪ್ರಗತಿಯಲ್ಲಿರುವ ಬಗ್ಗೆ ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.
- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕ್ಷರು ಮಾತನಾಡುತ್ತಾ, ಕನಕನಗರದ 20ನೇ ಕ್ರಾಸ್ ರಸ್ತೆಯ ನಿವೇಶನ ಕಟ್ಟಡದಲ್ಲಿ ಹಾವುಗಳಿದ್ದು, ಅದಕ್ಕೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿ ಕ್ರಮ ಕೈಗೊಳ್ಳುವ ಬಗ್ಗೆ ತಿಳಿಸಿದರು ಹಾಗೂ ಕನಕನಗರದ 18ನೇ ಕ್ರಾಸ್‌ನ ರಸ್ತೆಯ ಮುಂಭಾಗದಲ್ಲಿ ರಸ್ತೆ ಅಗಲೀಕರಣ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 +ve ಕೇಸ್‌ಗಳು ಹೆಚ್ಚಾಗುತ್ತಿದ್ದು, ವಾರ್ಡಿನಲ್ಲಿ ಈಗಾಗಲೇ ಕೋವಿಡ್ ವ್ಯಾಕ್ಷಿನೇಶನ್ ಅನ್ನು 45 ವರ್ಷ ಮೇಲ್ಪಟ್ಟವರಿಗೆ ಹಾಗೂ 18 ವರ್ಷ ಮೇಲ್ಪಟ್ಟ ಜನರಿಗೆ ಮೊದಲ ಹಾಗೂ ಎರಡನೇ ಡೋಸ್ ವ್ಯಾಕ್ಷಿನೇಶನ್ ನೀಡುತ್ತಿರುವ ಬಗ್ಗೆ ತಿಳಿಸಿದರು.
- ಶ್ರೀ ಮಧು ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಬುವನೇಶ್ವರಿನಗರದ 2ನೇ ಕ್ರಾಸ್‌ನ ರಸ್ತೆಯ ಮೇಲೆ ಕೆಲವು ನಿವಾಸಿಗಳು ಸೌಧೆಗಳಿಂದ ಬಿಸಿ ನೀರು ಕಾಯಿಸುತ್ತಿರುವ ಬಗ್ಗೆ ಹಾಗೂ ಕೂಡಲೇ ಕ್ರಮಕೈಗೊಳ್ಳುವಂತೆ ತಿಳಿಸಿದರು.
- ಶ್ರೀ. ಡೇವಿಡ್ ಫರ್ನಾಂಡಿಸ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, ಕನಕನಗರದ 10ನೇ ಕ್ರಾಸ್ ರಸ್ತೆಯಲ್ಲಿ ಈಗಾಗಲೇ ಅಲಲ್ಲಿ ಬಿದ್ದಿರುವ ಗುಂಡಿಗಳನ್ನು ಸರಿಪಡಿಸಲಾಗಿದೆ ಹಾಗೂ 7ನೇ ಕ್ರಾಸ್ ರಸ್ತೆಯಲ್ಲಿ ಬಿದ್ದಿರುವ ಗುಂಡಿಗಳನ್ನು ಶೀಘ್ರವಾಗಿ ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕರು ಮಾತನಾಡುತ್ತಾ, ಕನಕನಗರದ 20ನೇ ಕ್ರಾಸ್ ರಸ್ತೆಯು ತೀರಾ ಹಾಳಾಗಿದ್ದು, ರಸ್ತೆಯನ್ನು ಮರು ಡಾಂಬರೀಕರಣ ಮಾಡುವಂತೆ ತಿಳಿಸಿದರು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ದಕ್ಷಿಣ ಆಫ್ರಿಕಾದಲ್ಲಿ ಕೋವಿಡ್ +ve ಕೇಸ್ ಗಳು ಹೆಚ್ಚಾಗುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಮುಂಜಾಗ್ರತ ಕ್ರಮವಹಿಸುತ್ತೀರುವ ಬಗ್ಗೆ ತಿಳಿಸಿದರು ಹಾಗೂ ಡೆಂಗ್ಯೂ ಜ್ವರ ಬರುವ ಸಾಧ್ಯತೆ ಹೆಚ್ಚು ಇರುವುದರಿಂದ ಅದನ್ನು ತಡೆಗಟ್ಟುವ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಕೋವಿಡ್ ವಾಕ್ಷಿನೇಶನ್‌ಅನ್ನು ಮೊದಲನೇಯ ಡೋಸ್ ಶೇಕಡ 90% ರಷ್ಟು ಹಾಗೂ ಎರಡನೇ ಡೋಸ್ ಶೇಕಡ 70% ರಷ್ಟು ಕೋವಿಡ್ ಲಸಿಕೆಯನ್ನು ನೀಡಲಾಗಿದ್ದು, ಸರ್ಕಾರದ ಆದೇಶದಂತೆ ಮುಂಬರುವ ದಿನಗಳಲ್ಲಿ ಮಾಸ್ಕ್ ಅನ್ನು ಕಡ್ಡಾಯವಾಗಿ ಧರಿಸಬೇಕಾಗಿರುತ್ತದೆ, ತಪ್ಪಿದ್ದಲ್ಲಿ ದಂಡವನ್ನು ವಿಧಿಸುವ ಸಾಧ್ಯತೆ ಇದೆ ಎಂದು ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದವರಿಗೆ ಸರ್ಕಾರದಿಂದ ಕೋವಿಡ್ ಪರಿಹಾರ ನಿಧಿಗೆ ಸಾರ್ವಜನಿಕರು ಅರ್ಜಿಗಳನ್ನು ಸಲ್ಲಿಸುವ ಬಗ್ಗೆ ತಿಳಿಸಿದರು ಹಾಗೂ ಅದಕ್ಕೆ ಸಂಬಂಧಪಟ್ಟ ದಾಖಲಾತಿಗಳು ಮತ್ತು ಅದರ ಅನುಕೂಲತೆಗಳ ಬಗ್ಗೆ ಹಾಜರಿದ್ದ ಸದಸ್ಯರಿಗೆ ವಿವರಣೆ ನೀಡಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಿಗೆ ಕಡ್ಡಾಯವಾಗಿ ಔಷಧಿ ಸಿಂಪರಣೆ (Chemical spray)ಮಾಡಲಾಗುತ್ತಿದೆ ಎಂದು ತಿಳಿಸಿದರು.
- ಶ್ರೀಮತಿ ಹೇಮಾಲತ, ನಾಗರೀಕರು ಮಾತನಾಡುತ್ತಾ, ಬಿಬಿಎಂಪಿ ಅನುದಾನದಡಿಯಲ್ಲಿ ವಿದ್ಯಾರ್ಥಿವೇತನ ಮರು ಶುಲ್ಕಪಾವತಿಗೆಂದು ಅರ್ಜಿಗಳನ್ನು ವಾರ್ಡ್ ಕಮಟಿ ಸಭೆಯಲ್ಲಿ ಸಲ್ಲಿಸಿರುತ್ತಾರೆ. ಹಾಗೂ 6ನೇ 'ಎ' ಕ್ರಾಸ್ ಕನಕನಗರದಲ್ಲಿ Street lightಗಳು ಹಾಳಾಗಿದ್ದು ಅದನ್ನು ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಡೇವಿಡ್ ಫರ್ನಾಂಡಿಸ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, ಕನಕನಗರದ 8ನೇ ಕ್ರಾಸ್ ರಸ್ತೆಯನ್ನು ಮರು ಡಾಂಬರೀಕರಣ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12;45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಹಾಗೂ
ಸಹಾಯಕ ಅಭಿಯಂತರರು ವಾರ್ಡ್ ನಂ:22